# Bangalore
# Regional News
# 16.03.2026 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಸದನದಲ್ಲಿ ಲಿಖಿತ ಪ್ರಶ್ನೆಗಳಿಗೆ ಉತ್ತರ ನೀಡದ ಅಧಿಕಾರಿಗಳು ಅಮಾನತು; ವಿಧಾನಸಭೆಯಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟನೆ
2. ಮಹಿಳಾ ಶಿಕ್ಷಕರು ಮನವಿ ಸಲ್ಲಿಸಿದ 15 ದಿನಗಳೊಳಗೆ ಮಾತೃತ್ವ ರಜೆ ಮಂಜೂರು– ಸಚಿವ ಮಧುಬಂಗಾರಪ್ಪ
3. ರಾಜ್ಯದಲ್ಲಿ ನೀಟ್ ವ್ಯವಸ್ಥೆ ರದ್ದು ಮಾಡುವುದಿಲ್ಲ; ಮೇಲ್ಮನೆಯಲ್ಲಿ ಸಚಿವ ಶರಣಪ್ರಕಾಶ್ ಪಾಟೀಲ್ ಭರವಸೆ
4. ಅಮರೇಶ ನುಗಡೋಣಿ ಅವರ "ದಡ ಸೇರಿಸು ತಂದೆ" ಕಥಾ ಸಂಕಲನಕ್ಕೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ
5. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯ ಆಯೋಜಿಸಲು ಕೆಎಸ್‌ಸಿಎ ಗೆ ಅಧಿಕೃತ ಅನುಮತಿ ನೀಡಿದ ಸರ್ಕಾರ

***************

ಸದಸ್ಯರ ಪ್ರಶ್ನೆಗಳಿಗೆ ಸಚಿವರು ಸರಿಯಾದ ಸಮಯಕ್ಕೆ ಉತ್ತರ ನೀಡದ ಹಿನ್ನೆಲೆಯಲ್ಲಿ ಅಸಮಾಧಾನಗೊಂಡ ಸಭಾಧ್ಯಕ್ಷ ಯು.ಟಿ.ಖಾದರ್ ಸದನವನ್ನು ಮುಂದೂಡುವ ಮೂಲಕ ಇಂದು ರಾಜ್ಯ ವಿಧಾನಸಭೆ ಐತಿಹಾಸಿಕ ನಿರ್ಣಯವೊಂದಕ್ಕೆ ಸಾಕ್ಷಿಯಾಯಿತು.

ಬಳಿಕ ಸದನ ಸೇರಿದಾಗ, ಲಿಖಿತ ಪ್ರಶ್ನೆಗಳಿಗೆ ಸಮಯಕ್ಕೆ ಸರಿಯಾಗಿ ಉತ್ತರ ನೀಡದ ಅಧಿಕಾರಿಗಳನ್ನು ಅಮಾನತು ಮಾಡುವುದಾಗಿ ಸರ್ಕಾರ ಎಚ್ಚರಿಕೆ ನೀಡಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು.

ಒಂದು ವೇಳೆ ಯಾವುದೇ ಇಲಾಖೆ ಕಾರ್ಯದರ್ಶಿಗಳು ಆಯಾ ಇಲಾಖೆಗೆ ಸಂಬಂಧಿಸಿದಂತೆ ಪ್ರಶ್ನೆಗಳಿಗೆ ಉತ್ತರ ನೀಡದಿದ್ದರೆ ಆ ಇಲಾಖೆಯ ಕಾರ್ಯದರ್ಶಿಗಳನ್ನೆ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು. ಭವಿಷ್ಯದಲ್ಲಿ ಇಂತಹ ತಪ್ಪು ಆಗದಂತೆ ಸರ್ಕಾರ ಮುನ್ನಚರಿಕೆ ವಹಿಸುತ್ತದೆ ಎಂದು ಸದನಕ್ಕೆ ಭರವಸೆ ನೀಡಿದರು.

ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಸಭಾಧ್ಯಕ್ಷರು ಇಂದು ಕೈಗೊಂಡ ನಿರ್ಣಯ ಸದನದ ಇತಿಹಾಸದಲ್ಲಿ ಮೈಲಿಗಲ್ಲಾಗಿದ್ದು, ಸಭಾಧ್ಯಕ್ಷರಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಸಭಾಧ್ಯಕ್ಷ ಯು.ಟಿ.ಖಾದರ್ ಮಾತನಾಡಿ, ಸದನದ ಗೌರವ ಎತ್ತಿಹಿಡಿಯಲು ಈ ರೀತಿಯ ನಿರ್ಧಾರ ತಗೆದುಕೊಳ್ಳಬೇಕಾಯಿತು ಎಂದು ಸದನ ಮುಂದೂಡಿದ ಪ್ರಸಂಗದ ಅನಿವಾರ್ಯತೆ ಬಗ್ಗೆ ತಿಳಿಸಿದರು.

***************

ಮಾತೃತ್ವ ರಜೆ ಹಾಗೂ ಶಿಶುಪಾಲನಾ ರಜೆಯ ಮೇಲೆ ತೆರಳುವ ಮಹಿಳಾ ಶಿಕ್ಷಕರ ರಜೆಯ ಅವಧಿಗೆ ಅತಿಥಿ ಶಿಕ್ಷಕರನ್ನು ನಿಯುಕ್ತಿಗೊಳಿಸಲು ಕ್ರಮವಹಿಸಲಾಗುವುದು ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವ ಮಧುಬಂಗಾರಪ್ಪ ತಿಳಿಸಿದ್ದಾರೆ.

ಮೇಲ್ಮನೆಯಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ವೈ.ಎಂ.ಸತೀಶ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು ಮಾತೃತ್ವ ರಜೆಯ ನಂತರ ಮರಳಿ ಕರ್ತವ್ಯಕ್ಕೆ ಹಾಜರಾಗುವ ಮಹಿಳಾ ಶಿಕ್ಷಕರಿಗೆ ಮಗುವಿನ ವಯಸ್ಸು 5 ವರ್ಷ ಪೂರ್ಣಗೊಳ್ಳುವವರೆಗೂ ಮಗುವಿಗೆ ಅನುಕೂಲವಾಗುವ ರೀತಿಯಲ್ಲಿ ಮಹಿಳಾ ನೌಕರರು ಇಚ್ಛಿಸುವ ಸ್ಥಳಕ್ಕೆ ನಿಯುಕ್ತಿಗೊಳಿಸಲಾಗುವುದು ಎಂದು ಹೇಳಿದರು.

ಮಹಿಳಾ ಶಿಕ್ಷಕರಿಗೆ ಮಾತೃತ್ವ ರಜಾಮನವಿ ಸ್ವೀಕೃತಗೊಂಡ 15 ದಿನಗಳೊಳಗಾಗಿ ಸಕ್ಷಮ ಪ್ರಾಧಿಕಾರದಿಂದ ಮಾತೃತ್ವ ರಜೆಯನ್ನು ಮಂಜೂರು ಮಾಡಲಾಗುವುದು ಎಂದು ಸ್ಪಷ್ಟಪಡಿಸಿದರು.

***************

ರಾಜ್ಯದಲ್ಲಿ ನೀಟ್ ವ್ಯವಸ್ಥೆ ರದ್ದು ಮಾಡುವುದಿಲ್ಲ ಎಂದು ಮೇಲ್ಮನೆಯಲ್ಲಿ ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಭರವಸೆ ಸ್ಪಷ್ಟಪಡಿಸಿದ್ದಾರೆ.

ಸದಸ್ಯ ಐವಾನ್ ಡಿಸೋಜಾ ಮಾತನಾಡಿ, ರಾಜ್ಯದಲ್ಲಿ ನೀಟ್ ವ್ಯವಸ್ಥೆ ರದ್ದುಮಾಡಬೇಕು. ಸಿಇಟಿ ಅಡಿಯೇ ಮೆಡಿಕಲ್ ಸೀಟ್ ರಾಜ್ಯದ ಮಕ್ಕಳಿಗೆ ನೀಡಬೇಕು ಎಂದು ಒತ್ತಾಯಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ನೀಟ್ ವ್ಯವಸ್ಥೆಯನ್ನು ರಾಜ್ಯದಲ್ಲಿ ಹಿಂಪಡೆಯುವ ಪ್ರಶ್ನೆಯೇ ಇಲ್ಲ ಎಂದು ತಿಳಿಸಿದರು.

ಸುಪ್ರೀಂಕೋರ್ಟ್ ಆದೇಶವಿದ್ದು, ಸಂಸತ್‌ನಲ್ಲಿ ಇದು ಕಾಯ್ದೆಯಾಗಿದೆ ಎಂದರು.

***************

2025ರ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪ್ರಕಟಗೊಂಡಿದೆ. ಕನ್ನಡದ ಅಮರೇಶ ನುಗಡೋಣಿ ಅವರ 'ದಡ ಸೇರಿಸು ತಂದೆ' ಕಥಾ ಸಂಕಲನಕ್ಕೆ ಅಕಾಡೆಮಿ ಪ್ರಶಸ್ತಿ ಒಲಿದು ಬಂದಿದೆ.

ಈ ಬಾರಿ, ಡಾ.ಸಿದ್ದಲಿಂಗ ಪಟ್ಟಣ ಶೆಟ್ಟಿ, ಡಾ.ಜಯಲಲಿತಾ ಮತ್ತು ಸಹನಾ ಕಾಂತಬೈಲು ಆಯ್ಕೆ ಸಮಿತಿಯಲ್ಲಿದ್ದರು. ಪ್ರಶಸ್ತಿ 1 ಲಕ್ಷ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಸ್ಮರಣಿಕೆಯನ್ನು ಒಳಗೊಂಡಿರುತ್ತದೆ.

ಕೊಂಕಣಿ ಸಾಹಿತಿ, ಪತ್ರಕರ್ತ ಮಂಗಳೂರಿನ ಹೆನ್ರಿ ಮೆಂಡೋನ್ಸಾ ಅವರ ರೂಪಾನಿ ಅನಿ ರೂಪಕಾಂ ಸಾಹಿತ್ಯ ವಿಮರ್ಶೆ ಕೃತಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಲಭಿಸಿದೆ.

***************

ಬಾಗಲಕೋಟೆ ಹಾಗೂ ದಾವಣಗೆರೆ ಉಪಚುನಾವಣೆಯ ಗೆಲುವಿನಲ್ಲಿ ಕಾಂಗ್ರೆಸ್ ಮಹಿಳಾ ಸದಸ್ಯರ ಪಾತ್ರ ಮಹತ್ವವಾದುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ವತಿಯಿಂದ ಆಯೋಜಿಸಲಾಗಿದ್ದ ಕಾರ್ಯಕಾರಿ ಸಭೆ ಮತ್ತು ತರಬೇತಿ ಶಿಬಿರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರ ಆರ್ಥಿಕ ಸ್ವಾತಂತ್ರ್ಯ ಹೆಚ್ಚಾಗಿದ್ದು, ಆತ್ಮವಿಶ್ವಾಸವೂ ಹೆಚ್ಚಿದೆ ಎಂದು ಹೇಳಿದ್ದಾರೆ.

***************

ರಾಜ್ಯದಲ್ಲಿ ಭ್ರಷ್ಟಾಚಾರ ವ್ಯಾಪಕವಾಗಿದ್ದು, ಹಿರಿಯ ಅಧಿಕಾರಿಗಳ ವಿರುದ್ಧ 195 ಪ್ರಕರಣಗಳು ದಾಖಲಾಗಿವೆ. ಇದು ರಾಜ್ಯದ ಭ್ರಷ್ಟಾಚಾರದ ಪ್ರಮಾಣವನ್ನು ತೋರಿಸುತ್ತದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.

ಇಡೀ ಸರ್ಕಾರವೇ ಭ್ರಷ್ಟಾಚಾರದಲ್ಲಿ ಮುಳುಗಿದ್ದು, ಹಿರಿಯ ಅಧಿಕಾರಿಗಳು ಅದೇ ಹಾದಿಯನ್ನು ಅನುಸರಿಸುತ್ತಿದ್ದಾರೆ ಎಂದು ದೂರಿದ್ದಾರೆ.

ಸೆಪ್ಟಂಬರ್ 2022 ರಿಂದ ಫೆಬ್ರವರಿ 2026ರ ನಡುವೆ ಲೋಕಾಯುಕ್ತ ಅಧಿಕಾರಿಗಳು, ಐಎಎಸ್, ಐಪಿಎಸ್ ಮತ್ತು ಕರ್ನಾಟಕ ಆಡಳಿತ ಸೇವೆಯ ಅಧಿಕಾರಿಗಳು ಸೇರಿದಂತೆ 195 ಸರ್ಕಾರಿ ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

***************

ಎಲ್‌ಪಿಜಿ ಸಿಲಿಂಡರ್ ಪೂರೈಕೆಯಲ್ಲಿ ಉಂಟಾಗುವ ವಿಳಂಬ, ಹೆಚ್ಚುವರಿ ಹಣ ವಸೂಲಿ, ಬುಕ್ಕಿಂಗ್ ಮಾಡಿದ ಬಳಿಕ ಸಮಯಕ್ಕೆ ಸಿಲಿಂಡರ್ ದೊರೆಯದಿರುವುದು ಸೇರಿದಂತೆ ವಿವಿಧ ಸಮಸ್ಯೆಗಳನ್ನು ಪರಿಹರಿಸಲು ಗದಗ ಜಿಲ್ಲಾಡಳಿತ ವ್ಯವಸ್ಥೆ ಕಲ್ಪಿಸಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲ ಎಲ್‌ಪಿಜಿ ಗ್ರಾಹಕರು ತಮ್ಮ ಸಮಸ್ಯೆಗಳನ್ನು ಸಂಬಂಧಿತ ಅಧಿಕಾರಿಗಳಿಗೆ ತಿಳಿಸಿ ತ್ವರಿತ ಪರಿಹಾರ ಪಡೆಯಬಹುದು ಎಂದು ಹೇಳಿದ್ದಾರೆ.

ಸರ್ಕಾರದ ನಿಯಮಾನುಸಾರ ಎಲ್‌ಪಿಜಿ ಸಿಲಿಂಡರ್ ಪೂರೈಕೆ ನಡೆಯಬೇಕು. ಗ್ರಾಹಕರಿಗೆ ಯಾವುದೇ ರೀತಿಯ ತೊಂದರೆ ಉಂಟಾದಲ್ಲಿ ಜಿಲ್ಲಾಡಳಿತದಿಂದ ತಕ್ಷಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

***************

ಚಾಮರಾಜನಗರ ಜಿಲ್ಲೆಯಲ್ಲಿ ಗೃಹಬಳಕೆ ಸಿಲಿಂಡರ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯ ಆಗಿಲ್ಲ ಆದರೆ ವಾಣಿಜ್ಯ ಬಳಕೆ ಸಿಲಿಂಡರ್ ಪೂರೈಕೆಯಲ್ಲಿ ಸಮಸ್ಯೆಯಾಗಿದ್ದು ಶೀಘ್ರವೇ ಬಗೆಹರಿಯಲಿದೆ ಎಂದು ಜಿಲ್ಲಾಧಿಕಾರಿ ಶ್ರೀರೂಪ ತಿಳಿಸಿದ್ದಾರೆ.

ಸರ್ವರ್ ಡೌನ್ ನಿಂದ ಬುಕ್ಕಿಂಗ್ ಸಮಸ್ಯೆಯಾಗಿದೆ, ಗೃಹ ಬಳಕೆ ಸಿಲಿಂಡರ್ ಪೂರೈಕೆಯಲ್ಲಿ ಯಾವುದೇ ಕೊರತೆ ಇಲ್ಲ. ಹೀಗಾಗಿ ಆತಂಕ ಪಡಬೇಕಾದ ಅಗತ್ಯವಿಲ್ಲ ಎಂದು ಹೇಳಿದ್ದಾರೆ.

***************

ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಕೇಂದ್ರ ಚುನಾವಣಾ ಆಯೋಗ ಅಧಿಸೂಚನೆ ಹೊರಡಿಸಿದ್ದು, ಏಪ್ರಿಲ್ 9 ರಂದು ಮತದಾನ ನಡೆಯಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾರ್ಚ್ 15ರಿಂದ ಜಿಲ್ಲೆಯಾದ್ಯಂತ ಮಾದರಿ ನೀತಿ ಸಂಹಿತೆ ಜಾರಿಯಾಗಿದೆ ಎಂದು ತಿಳಿಸಿದ್ದಾರೆ.

ಬಾಗಲಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 319 ಮತಗಟ್ಟೆಗಳಿದ್ದು, ಅದರಲ್ಲಿ ಗ್ರಾಮೀಣ ಪ್ರದೇಶದಲ್ಲಿ 176 ಮತ್ತು ನಗರ ಪ್ರದೇಶದಲ್ಲಿ 143 ಮತಗಟ್ಟೆಗಳಿವೆ ಎಂದು ಮಾಹಿತಿ ನೀಡಿದ್ದಾರೆ.

ಧ್ವನಿ: ಸಂಗಪ್ಪ, ಜಿಲ್ಲಾಧಿಕಾರಿ

***************

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ 2026ರ ಐಪಿಎಲ್ ಪಂದ್ಯಗಳನ್ನು ಆಯೋಜಿಸಲು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಗೆ ರಾಜ್ಯ ಸರ್ಕಾರ ಅಧಿಕೃತ ಅನುಮತಿ ನೀಡಿದೆ.

ಮಾರ್ಚ್ 13 ರಂದು ಕೆಎಸ್‌ಸಿಎ ಅಧಿಕಾರಿಗಳು, ಗೃಹ ಸಚಿವರು ಸುರಕ್ಷತಾ ಕ್ರಮಗಳನ್ನು ಪರಿಶೀಲಿಸಿದ ತಜ್ಞರ ಸಮಿತಿಯ ಸಭೆಯ ಬಳಿಕ ಇಂದು ಕೆಎಸ್‌ಸಿಎ ಅಧಿಕೃತ ಘೋಷಣೆ ಮಾಡಿದೆ.

ಆರ್‌ಸಿಬಿ, ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐದು ಪಂದ್ಯಗಳನ್ನು ಆಡಲಿದ್ದು, ಎರಡು ಪಂದ್ಯಗಳು ರಾಯ್‌ಪುರದಲ್ಲಿ ನಡೆಯಲಿವೆ.

ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಇದೇ 28 ರಂದು ಸನ್ ರೈಸರ್ಸ್ ಹೈದರಾಬಾದ್ ತಂಡವನ್ನು ಎದುರಿಸಲಿದೆ.

***************

ಬೆಂಗಳೂರಿನಲ್ಲಿ ಇದೇ 26 ರಂದು ವರ್ಲ್ಡ್ 10-ಕೆ 18ನೇ ಆವೃತ್ತಿ ನಡೆಯಲಿದೆ. ಈ ಆವೃತ್ತಿಯಲ್ಲಿ ಭಾಗವಹಿಸಲು ವಿಶ್ವದ ಕೆಲವು ಅತ್ಯುತ್ತಮ ಓಟಗಾರರು ಹೆಸರು ನೋಂದಾಯಿಸಿಕೊಂಡಿದ್ದಾರೆ.

ಉಗಾಂಡಾದ ಹಾರ್ಬರ್ಟ್ ಕಿಬೆಟ್, ಖೈರಿ ಬೆಜಿಗಾ ಅವರು ಸ್ಥಾನಪಡೆದಿದ್ದಾರೆ. ಐದು ಸಾವಿರ ಮೀಟರ್ ಓಟದಲ್ಲಿ ಎರಡು ಬಾರಿಯ ವಿಶ್ವ ಚಾಂಪಿಯನ್ ಮುಕ್ತಾರ್ ಎಡ್ರಿಸ್ ಕೂಡ ಪ್ರಶಸ್ತಿಗಾಗಿ ಕಣಕ್ಕಿಳಿಯಲಿದ್ದಾರೆ.

ಈ ಓಟದಲ್ಲಿ 2 ಲಕ್ಷದ 10 ಸಾವಿರ ಅಮೆರಿಕನ್ ಡಾಲರ್ ಬಹುಮಾನ ನೀಡಲಾಗುತ್ತಿದೆ. ಪುರುಷ ಹಾಗೂ ಮಹಿಳೆಯರ ವಿಭಾಗಗಳಲ್ಲಿ ವಿಜೇತರಿಗೆ 26 ಸಾವಿರ ಅಮೆರಿಕನ್ ಡಾಲರ್ ಬಹುಮಾನ ಘೋಷಿಸಲಾಗಿದೆ.

***************

ಸಂಕ್ಷಿಪ್ತ ಸುದ್ದಿಗಳು

1. ಕೋಲಾರ ನಗರದ ಹೋಟೆಲ್‌ಗಳಲ್ಲಿ ಗೃಹ ಬಳಕೆ ಸಿಲಿಂಡರ್ ಬಳಕೆ ಆರೋಪ ಹಿನ್ನೆಲೆಯಲ್ಲಿ ವಿವಿಧ ಹೋಟೆಲ್‌ಗಳಿಗೆ ಅಪರ ಜಿಲ್ಲಾಧಿಕಾರಿ ಎಸ್.ಎಂ.ಮಂಗಳ ನೇತೃತ್ವದಲ್ಲಿ ತಹಶೀಲ್ದಾರ್ ಡಾ.ನಯನ ಮತ್ತು ಆಹಾರ ಇಲಾಖೆಯ ಅಧಿಕಾರಿಗಳು ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು.
2. ಗದಗನಲ್ಲಿ ನಡೆದ ಮಾಜಿ ಸಚಿವ ದಿವಂಗತ ಕೆ.ಎಚ್.ಪಾಟೀಲ್ 101ನೇ ಜನ್ಮ ದಿನೋತ್ಸವ ಕಾರ್ಯಕ್ರಮವನ್ನು ಇಂಧನ ಸಚಿವ ಕೆ.ಜೆ.ಜಾರ್ಜ್ ಉದ್ಘಾಟಿಸಿದರು.
3. ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ನಿರ್ದೇಶನದಂತೆ ಮೈಸೂರಿನಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಲೋಕ್ ಅದಾಲತ್ ನಲ್ಲಿ 12 ಸಾವಿರದ 764 ಪ್ರಕರಣ ಇತ್ಯರ್ಥ ಪಡಿಸಲಾಗಿದೆ.

*******ಮುಕ್ತಾಯ********